# ಶಾಲೆಯ ಮುಖ್ಯೋಪಾಧ್ಯಾಯರು ಕೈಗೊಳ್ಳಬೇಕಾದ ಕ್ರಮಗಳು

- ಪ್ರಸಕ್ತ ಸಾಲಿನಲ್ಲಿ 1ನೇ ತರಗತಿಗೆ ಪ್ರವೇಶ ಪಡೆದ ಹಾಗೂ ಹಿಂದಿನ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿ ವೇತನಕ್ಕೆ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ನೋಂದಣಿ ಮಾಡದಿರುವ ವಿದ್ಯಾರ್ಥಿಗಳು ಮಾತ್ರ ಈ ವರ್ಷ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಬೇಕು.
- ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನಕ್ಕೆ ಆನ್‌ಲೈನ್ ನೋಂದಣಿ ಮಾಡಲು ಇಲಾಖೆಯ ವೆಬ್ ಸೈಟ್(www.sw.kar.nic.in)ನಲ್ಲಿ ***Online Application for Prematric Scholarship*** ಲಿಂಕ್‌ನ್ನು ಕ್ಲಿಕ್ ಮಾಡುವುದು.
- ನಿಮ್ಮ ಶಾಲೆಯ ವಿವರವು ತಪ್ಪಿದ್ದಲ್ಲಿ ಅಥವಾ ಇಲ್ಲದಿದ್ದಲ್ಲಿ, ಕೂಡಲೇ ನಿಮ್ಮ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸುವುದು.
- ವಿದ್ಯಾರ್ಥಿಯ ವಿದ್ಯಾರ್ಥಿ ವೇತನವು ಬ್ಯಾಂಕ್ ಖಾತೆಗೆ ಜಮೆಯಾಗಿರುವ ಬಗ್ಗೆ ಅಥವಾ ಅರ್ಜಿಯಲ್ಲಿ ಯಾವುದಾದರೂ ತೊಂದರೆಯಿದ್ದಲ್ಲಿ ವಿದ್ಯಾರ್ಥಿಗೆ ಎಸ್‌ಎಂಎಸ್/ಕರೆ ಮೂಲಕ ಮಾಹಿತಿ ನೀಡಲು, ವಿದ್ಯಾರ್ಥಿಯ ತಂದೆ ಅಥವಾ ತಾಯಿ ಅಥವಾ ಪೋಷಕರ ಸರಿಯಾದ 10 ಅಂಕಿಗಳ ಮೊಬೈಲ್ ದೂರವಾಣಿ ಸಂಖ್ಯೆಯನ್ನು ಕಡ್ಡಾಯವಾಗಿ ಒದಗಿಸಲು ತಿಳಿಸುವುದು.
- ವಿದ್ಯಾರ್ಥಿ/ ಪೋಷಕರಿಗೆ ಅರ್ಜಿ ಸಲ್ಲಿಸುವಾಗ ಸಹಾಯವಾಗಲು ತಮ್ಮ ಶಾಲೆಯ DISE ಕೋಡ್ ಹಾಗೂ ಶಾಲೆಯ ಹೆಸರು ಮತ್ತು ವಿಳಾಸವನ್ನು ವಿದ್ಯಾರ್ಥಿ/ ಪೋಷಕರಿಗೆ ತಿಳಿಸುವುದು.
- ವಿದ್ಯಾರ್ಥಿಯು ಬ್ಯಾಂಕ್ ಖಾತೆ ಹೊಂದಿಲ್ಲದಿದ್ದಲ್ಲಿ NEFT ಸೇವೆ ಹೊಂದಿರುವ ಯಾವುದಾದರೂ ರಾಷ್ಟ್ರೀಕೃತ/ಶೆಡ್ಯೂಲ್ಡ್ ಬ್ಯಾಂಕಿನಲ್ಲಿ ವಿದ್ಯಾರ್ಥಿಯ ಹೆಸರಿನಲ್ಲಿ No Frill ಖಾತೆ ತೆರೆಯಲು ಕ್ರಮಕೈಗೊಳ್ಳುವುದು.
- ತಮ್ಮ ಶಾಲೆಯ ವಿದ್ಯಾರ್ಥಿಗಳು No Frill ಖಾತೆ ತೆರೆಯುವ ಬಗ್ಗೆ, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯಿಂದ ಮಾಹಿತಿ ಪಡೆದುಕೊಂಡು, ತಮ್ಮ ಹತ್ತಿರದ RTGS/NEFT ಸೇವೆ ಹೊಂದಿರುವ ರಾಷ್ಟ್ರೀಕೃತ/ಶೆಡ್ಯೂಲ್ಡ್ ಬ್ಯಾಂಕಿನ ಮ್ಯಾನೇಜರ್‌ನ್ನು ಸಂಪರ್ಕಿಸುವುದು ಮತ್ತು ಬ್ಯಾಂಕ್ ಖಾತೆ ತೆರೆಯಲು ವಿದ್ಯಾರ್ಥಿ/ ಪೋಷಕರಿಗೆ ಮಾರ್ಗದರ್ಶನ ನೀಡುವುದು.
- ವಿದ್ಯಾರ್ಥಿಯ ತಂದೆಯ ಜೀವಂತವಾಗಿದ್ದಲ್ಲಿ, ತಂದೆಯ ಆದಾಯ ಪ್ರಮಾಣ ಪತ್ರ ಅಥವಾ ತಂದೆ ಜೀವಂತವಾಗಿಲ್ಲದಿದ್ದಲ್ಲಿ, ತಾಯಿಯ ಆದಾಯ ಪ್ರಮಾಣ ಪತ್ರ ಅಥವಾ ತಂದೆ-ತಾಯಿ ಇಬ್ಬರು ಜೀವಂತವಾಗಿಲ್ಲದಿದ್ದಲ್ಲಿ ಮಾತ್ರ ಪೋಷಕರ ಆದಾಯ ಪ್ರಮಾಣ ಪತ್ರವನ್ನು ಪಡೆಯಲು ಸೂಚಿಸತಕ್ಕದ್ದು.
- ಆದಾಯ ಪ್ರಮಾಣ ಪತ್ರ ಅವಧಿ 5 ವರ್ಷಗಳಾಗಿದ್ದು, ಆನ್-ಲೈನ್ ನೋಂದಣಿ ಮಾಡುವಾಗ ಪ್ರಮಾಣ ಪತ್ರದ ವಿತರಣೆ ದಿನಾಂಕವನ್ನು ನಮೂದಿಸಬೇಕು.
- ವಿದ್ಯಾರ್ಥಿಗಳಿಗೆ ಆನ್‌ಲೈನ್ ಅರ್ಜಿ ಸೌಲಭ್ಯವನ್ನು ಒದಗಿಸಿರುವುದರಿಂದ, ಬೇರಾವುದೇ ಸ್ವರೂಪದ ಅರ್ಜಿಯನ್ನು ಇಲಾಖೆಯು ಪರಿಗಣಿಸುವುದಿಲ್ಲ.
- 1 ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಯು ಸರ್ಕಾರದ ಯಾವುದಾದರೂ ವಸತಿ ನಿಲಯ (ಹಾಸ್ಟೆಲ್)ದಲ್ಲಿ ದಾಖಲಾಗಿದ್ದಲ್ಲಿ, ಅಂತಹ ವಿದ್ಯಾರ್ಥಿಯು ವಿದ್ಯಾರ್ಥಿ ವೇತನ ಪಡೆಯಲು ಅರ್ಹನಿರುವುದಿಲ್ಲ. **ಆದರೆ 9 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಸರ್ಕಾರಿ ವಸತಿ ನಿಲಯದಲ್ಲಿ ವಾಸವಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮಂಜೂರು ಮಾಡಲು ಅವಕಾಶವಿರುತ್ತದೆ.**
- ವಿದ್ಯಾರ್ಥಿಯು ಆನ್‌ಲೈನ್ ರಿಜಿಸ್ಟರ್‌ನ ಸ್ವೀಕೃತಿಯನ್ನು ಪಡೆದು ವಿದ್ಯಾರ್ಥಿಯು ಸರಿಯಾಗಿ ಮಾಹಿತಿಯನ್ನು ಭರ್ತಿ ಮಾಡಿರುವ ಬಗ್ಗೆ ಶಾಲೆಯ ದಾಖಲೆ ಹಾಗೂ ಬ್ಯಾಂಕ್ ಖಾತೆಯ ವಿವರಗಳೊಂದಿಗೆ ಪರಿಶೀಲಿಸಿ, ತಪ್ಪಾಗಿ ನಮೂದಿಸಿದಲ್ಲಿ, ವಿದ್ಯಾರ್ಥಿಯ ನೋಂದಣಿ ಸಂಖ್ಯೆ ಹಾಗೂ ಹುಟ್ಟಿದ ದಿನಾಂಕದೊಂದಿಗೆ ಲಾಗಿನ್ ಆಗಿ, ಅರ್ಜಿಯನ್ನು ಮಾರ್ಪಾಡು ಮಾಡತಕ್ಕದ್ದು.
- ವಿದ್ಯಾರ್ಥಿಯ ಸ್ವೀಕೃತಿಯಲ್ಲಿ ತಮ್ಮ ಶಾಲೆಯ DISE ಕೋಡ್ ಮತ್ತು ಹೆಸರು ಸರಿಯಾಗಿರವ ಬಗ್ಗೆ ಖಾತರಿಪಡಿಸಿಕೊಳ್ಳತಕ್ಕದ್ದು.
- ಆನ್‌ಲೈನ್ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಗಳು ಕೈಗೊಳ್ಳಬೇಕಾದ ಕ್ರಮದ ಬಗ್ಗೆ ವಿದ್ಯಾರ್ಥಿ/ ಪೋಷಕರಿಗೆ ಇಲಾಖೆಯು ನೀಡಿರುವ ಮಾಹಿತಿಗಳನ್ನು, ವಿದ್ಯಾರ್ಥಿಗಳ ಪೋಷಕರ ಸಭೆ ಕರೆದು, ಮನದಟ್ಟು ಮಾಡಿಕೊಡುವುದು.
- ಆನ್‌ಲೈನ್ ಅರ್ಜಿ ಸ್ವೀಕೃತಿಯ ಒಂದು ಜೆರಾಕ್ಸ್ ಪ್ರತಿಯನ್ನು ಶಾಲೆಯ ಕಡತದಲ್ಲಿ ಇಟ್ಟುಕೊಳ್ಳತಕ್ಕದ್ದು.
- ಹಿಂದಿನ ಸಾಲಿನಲ್ಲಿ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನಲ್ಲಿ ಒಂದು ಶಾಲೆಯಿಂದ ಮತ್ತೊಂದು ಶಾಲೆಗೆ ವರ್ಗಾವಣೆಯಾಗಿ ದಾಖಲಾಗಿದ್ದರೆ, ದಾಖಲಾದ ಶಾಲೆಯ ಮುಖ್ಯೋಪಾಧ್ಯಾಯರು **ಅನುಬಂಧ-1ನ್ನು** ಭರ್ತಿ ಮಾಡಿ ಸಂಬಂಧಪಟ್ಟ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಗೆ ಸಲ್ಲಿಸುವುದು. ಒಂದು ವೇಳೆ

ವಿದ್ಯಾರ್ಥಿಯ ಹಿಂದಿನ ಸಾಲಿನ ನೋಂದಣಿ ಸಂಖ್ಯೆ ಲಭ್ಯವಿಲ್ಲದಿದ್ದರೆ. ವಿದ್ಯಾರ್ಥಿಯು ಕಳೆದ ವರ್ಷ ವ್ಯಾಸಂಗ ಮಾಡಿದ ಶಾಲೆಯನ್ನು ಸಂಪರ್ಕಿಸಿ, ಪಡೆಯತಕ್ಕದ್ದು.

- ಪ್ರಸಕ್ತ ಸಾಲಿನಿಂದ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನವನ್ನು ವಿದ್ಯಾರ್ಥಿಗಳ ಹೆಸರಿನ ಖಾತೆಗೆ ಜಮಾ ಮಾಡಬೇಕಿರುವುದರಿಂದ ಕಡ್ಡಾಯವಾಗಿ ಎಲ್ಲಾ ವಿದ್ಯಾರ್ಥಿಗಳು ಬ್ಯಾಂಕ್ ಖಾತೆಯನ್ನು ಹೊಂದಿರತಕ್ಕದ್ದು. ಹಿಂದಿನ ಸಾಲಿನಲ್ಲಿ ಪೋಷಕರ ಬ್ಯಾಂಕ್ ಖಾತೆಗೆ ವಿದ್ಯಾರ್ಥಿ ವೇತನ ಪಡೆದ ವಿದ್ಯಾರ್ಥಿಗಳು ಕೂಡ ತಮ್ಮ ಹೆಸರಿನಲ್ಲಿ ಬ್ಯಾಂಕ್ ಖಾತೆಯನ್ನು ತೆರೆದು, ವಿವರವನ್ನು **ಅನುಬಂಧ-2ರಲ್ಲಿ** ಭರ್ತಿ ಮಾಡಿ, ತಾಲ್ಲೂಕು ಸಮಾಜ ಕಲ್ಯಾಣಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು.
- ಈ ಯೋಜನೆಯು ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಹತ್ತರ ಯೋಜನೆಯಾಗಿದ್ದು ಅರ್ಹ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪಡೆಯಲು ಸೂಕ್ತ ಕ್ರಮ ಕೈಗೊಳ್ಳತಕ್ಕದ್ದು.
- ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸುವುದು ಹಾಗೂ ಬ್ಯಾಂಕ್ ಖಾತೆಯನ್ನು ತೆರೆಯುವುದು ಹಾಗೂ ನಿಗದಿತ ಸಮಯದಲ್ಲಿ ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಸಮಾಜ ಕಲ್ಯಾಣ ಇಲಾಖೆಗೆ ದಾಖಲೆಗಳನ್ನು ಸಲ್ಲಿಸಲು ವಿಳಂಬವಾದಲ್ಲಿ ಅಥವಾ ನಿರ್ಲಕ್ಷ್ಯ ತೋರಿದಲ್ಲಿ ಅಂತಹ ಶಾಲೆಯ ಮುಖ್ಯೋಪಾಧ್ಯಾಯರ ವಿರುದ್ಧ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು.